Kannada - ಗುಣಮಾಡುತ್ತಾ ಸ್ಕ್ರಿಪ್ಚರ್ಸ್ - Healing Scriptures

ವಿಮೋಚನಕಾಂಡ 15:26 ಆತನು-- ನೀನು ನಿನ್ನ ದೇವರಾದ ಕರ್ತನ ಸ್ವರಕ್ಕೆ ಶ್ರದ್ಧೆಯಿಂದ ಕಿವಿಗೊಟ್ಟು ಆತನ ದೃಷ್ಟಿಯಲ್ಲಿ ಸರಿಯಾದದ್ದನ್ನು ಮಾಡಿ ಆತನ ಆಜ್ಞೆಗಳಿಗೆ ಕಿವಿಗೊಟ್ಟು ಆತನ ನಿಯಮ ಗಳನ್ನು ಕೈಕೊಂಡರೆ ಐಗುಪ್ತ್ಯರ ಮೇಲೆ ಬರಮಾಡಿದ ಯಾವ ವ್ಯಾಧಿಯನ್ನೂ ನಿನ್ನ ಮೇಲೆ ಬರಮಾಡುವದಿಲ್ಲ; ನಿನ್ನನ್ನು ಸ್ವಸ್ಥಪಡಿಸುವ ಕರ್ತನು ನಾನೇ ಆಗಿದ್ದೇನೆ ಅಂದನು.

ಧರ್ಮೋಪದೇಶಕಾಂಡ 7:15 ಕರ್ತನು ಎಲ್ಲಾ ರೋಗಗಳನ್ನು ನಿನ್ನಿಂದ ತೆಗೆದು ಬಿಡುವನು; ನಿನಗೆ ತಿಳಿದಿರುವ ಐಗುಪ್ತದ ಕೆಟ್ಟ ರೋಗಗಳನ್ನೆಲ್ಲಾ ನಿನ್ನ ಮೇಲೆ ಬರಮಾಡದೆ ನಿನ್ನನ್ನು ಹಗೆಮಾಡುವವರೆಲ್ಲರ ಮೇಲೆ ಅವುಗಳನ್ನು ಬರ ಮಾಡುವನು.

ಕೀರ್ತನೆಗಳು 107:20 ಆತನು ತನ್ನ ವಾಕ್ಯವನ್ನು ಕಳುಹಿಸಿ ಅವರನ್ನು ಸ್ವಸ್ಥಮಾಡಿ ಅವರ ನಾಶನಗಳಿಂದ ಅವರನ್ನು ತಪ್ಪಿಸಿ ದನು.

ಕೀರ್ತನೆಗಳು 146:8 ಕರ್ತನು ಸೆರೆಯವರನ್ನು ಬಿಡಿಸುತ್ತಾನೆ. ಕರ್ತನು ಕುರುಡರ ಕಣ್ಣುಗಳನ್ನು ತೆರೆಯುತ್ತಾನೆ; ಕರ್ತನು ದೀನರರನ್ನು ಎತ್ತು ತ್ತಾನೆ; ಕರ್ತನು ನೀತಿವಂತರನ್ನು ಪ್ರೀತಿಮಾಡುತ್ತಾನೆ;

ಯೆಶಾಯ 35:5 ಆಗ ಕುರುಡರ ಕಣ್ಣುಗಳು ತೆರೆಯಲ್ಪಡು ವವು, ಕಿವುಡರ ಕಿವಿಗಳು ಕೇಳುವವು.

ಯೆಶಾಯ 53:5 ನಮ್ಮ ದ್ರೋಹಗಳ ನಿಮಿತ್ತ ಆತನಿಗೆ ಗಾಯವಾಯಿತು,

ನಮ್ಮ ದುಷ್ಕೃತ್ಯಗಳ ನಿಮಿತ್ತ ಆತನು ಜಜ್ಜಲ್ಪಟ್ಟನು; ನಮ್ಮ ಸಮಾಧಾನಕ್ಕೆ ಕಾರಣವಾದ ಶಿಕ್ಷೆಯು ಆತನ ಮೇಲೆ ಬಿತ್ತು; ಆತನ ಬಾಸುಂಡೆ ಗಳಿಂದ ನಮಗೆ ಸ್ವಸ್ಥವಾಯಿತು.

ಯೆಶಾಯ 58:8 ಹೀಗಾದರೆ ನಿನ್ನ ಬೆಳಕು ಉದಯದಂತೆ ಪ್ರತ್ಯಕ್ಷವಾಗುವದು. ನಿನ್ನ ಕ್ಷೇಮವು ಬೇಗನೆ ಚಿಗುರು ವದು. ನಿನ್ನ ನೀತಿಯು ನಿನಗೆ ಮುಂಬಲವಾಗಿ ಮುಂದ ರಿಯುವದು. ಕರ್ತನ ಮಹಿಮೆಯು ನಿನಗೆ ಹಿಂಬಲ ವಾಗಿರುವದು.

ಯೆರೆಮಿಯ 30:17 ಚೀಯೋನು ತಳ್ಳಿಬಿಡಲ್ಪ ಟ್ಟದ್ದೂ ಅದನ್ನು ವಿಚಾರಿಸುವವರು ಯಾರೂ ಇಲ್ಲ ವೆಂದೂ ಅವರು ನಿನ್ನ ವಿಷಯ ಹೇಳುವದರಿಂದ ನಿನಗೆ ಕ್ಷೇಮವನ್ನುಂಟು ಮಾಡುವೆನು; ನಿನ್ನ ಗಾಯ ಗಳನ್ನು ಸ್ವಸ್ಥ ಮಾಡುವೆನೆಂದು ಕರ್ತನು ಅನ್ನುತ್ತಾನೆ.

ಯೆರೆಮಿಯ 33:6 ಇಗೋ, ನಾನು ಅದಕ್ಕೆ ಕ್ಷೇಮವನ್ನೂ ಸ್ವಸ್ಥತೆಯನ್ನೂ ಹುಟ್ಟಿಸಿ ಅವರನ್ನು ಗುಣಮಾಡಿ ಸಮಾಧಾನದ ಸತ್ಯವನ್ನು ಸಮೃದ್ಧಿಯಾಗಿ ಅವರಿಗೆ ಪ್ರಕಟಮಾಡುವೆನು.

ಮಲಾಕಿಯ 4:2 ಆದರೆ ನನ್ನ ಹೆಸರಿಗೆ ಭಯಪಡುವವರಾದ ನಿಮಗೆ ನೀತಿಯ ಸೂರ್ಯನು ತನ್ನ ರೆಕ್ಕೆಗಳಲ್ಲಿ ಸ್ವಸ್ಥತೆಯನ್ನುಂಟು ಮಾಡುವವನಾಗಿ ಉದಯಿಸುವನು; ನೀವು ಹೊರಟು ಕೊಟ್ಟಿಗೆಯಿಂದ ಬಿಟ್ಟ ಕರುಗಳ ಹಾಗೆ ಕುಣಿದಾಡುವಿರಿ.

ಮತ್ತಾಯನು 4:23,24 ಬಳಿಕ ಯೇಸು ಗಲಿಲಾಯವನ್ನೆಲ್ಲಾ ಸಂಚರಿಸಿ ಅವರ ಸಭಾಮಂದಿರಗಳಲ್ಲಿ ಬೋಧಿಸುವಾತನಾಗಿ ರಾಜ್ಯದ

ಸುವಾರ್ತೆಯನ್ನು ಸಾರುತ್ತಾ ಜನರಲ್ಲಿದ್ದ ಎಲ್ಲಾ ತರದ ರೋಗಗಳನ್ನು ಸಕಲ ವಿಧವಾದ ಜಾಡ್ಯಗಳನ್ನೂ ಗುಣಮಾಡುತ್ತಾ ಇದ್ದನು. 24 ಆತನ ಕೀರ್ತಿಯು ಸಿರಿಯದಲ್ಲೆಲ್ಲಾ ಹರಡಿತು; ಆಗ ನಾನಾ ವಿಧವಾದ ರೋಗಗಳಿಂದ ಮತ್ತು ಯಾತನೆಗಳಿಂದ ಅಸ್ವಸ್ಥರಾದವರೆಲ್ಲರನ್ನೂ ದೆವ್ವಗಳು ಹಿಡಿದವರನ್ನೂ ಮೂರ್ಛಾ ರೋಗಿಗಳನ್ನೂ ಪಾರ್ಶ್ವವಾಯುರೋಗಿ ಗಳನ್ನೂ ಆತನ ಬಳಿಗೆ ತಂದರು. ಆತನು ಅವರನ್ನು ಸ್ವಸ್ಥಪಡಿಸಿದನು.

ಮತ್ತಾಯನು 8:16,17 ಸಾಯಂಕಾಲವಾದಾಗ ದೆವ್ವಗಳು ಹಿಡಿದಿದ್ದ ಬಹಳ ಜನರನ್ನು ಅವರು ಆತನ ಬಳಿಗೆ ತಂದರು; ಮತ್ತು ಆತನು ತನ್ನ ಮಾತಿನಿಂದ ದೆವ್ವಗಳನ್ನು ಬಿಡಿಸಿ ದ್ದಲ್ಲದೆ ಅಸ್ವಸ್ಥವಾಗಿದ್ದವರೆಲ್ಲರನ್ನೂ ಸ್ವಸ್ಥ ಮಾಡಿದನು. 17 ಹೀಗೆ--ಆತನು ತಾನೇ ನಮ್ಮ ಬಲಹೀನತೆಗಳನ್ನು ತಕ್ಕೊಂಡು ರೋಗಗಳನ್ನು ಹೊತ್ತನು ಎಂಬದಾಗಿ ಪ್ರವಾದಿಯಾದ ಯೆಶಾಯನಿಂದ ಹೇಳಲ್ಪಟ್ಟದ್ದು ನೆರವೇರುವಂತೆ ಇದಾಯಿತು.ಸಾಯಂಕಾಲವಾದಾಗ ದೆವ್ವಗಳು ಹಿಡಿದಿದ್ದ ಬಹಳ ಜನರನ್ನು ಅವರು ಆತನ ಬಳಿಗೆ ತಂದರು; ಮತ್ತು ಆತನು ತನ್ನ ಮಾತಿನಿಂದ ದೆವ್ವಗಳನ್ನು ಬಿಡಿಸಿ ದ್ದಲ್ಲದೆ ಅಸ್ವಸ್ಥವಾಗಿದ್ದವರೆಲ್ಲರನ್ನೂ ಸ್ವಸ್ಥ ಮಾಡಿದನು.

ಮತ್ತಾಯನು 9:35 ತರುವಾಯ ಯೇಸು ಎಲ್ಲಾ ಹಳ್ಳಿಗಳಲ್ಲಿಯೂ ಪಟ್ಟಣಗಳಲ್ಲಿಯೂ ಸಂಚರಿ ಸುತ್ತಾ ಅವರ ಸಭಾಮಂದಿರಗಳಲ್ಲಿ ಉಪದೇಶಿಸುತಾ ರಾಜ್ಯದ ಸುವಾರ್ತೆಯನ್ನು ಸಾರುತ್ತಾ ಜನರಲ್ಲಿದ್ದ

ಪ್ರತಿಯೊಂದು ಅಸ್ವಸ್ಥತೆಯನ್ನೂ ರೋಗವನ್ನೂ ವಾಸಿಮಾಡಿದರು.

ಮತ್ತಾಯನು 10:1,8 ಆತನು ತನ್ನ ಹನ್ನೆರಡು ಮಂದಿ ಶಿಷ್ಯರನ್ನು ತನ್ನ ಬಳಿಗೆ ಕರೆದು ಅಶುದ್ಧಾತ್ಮಗಳನ್ನು ಬಿಡಿಸುವಂತೆಯೂ ಎಲ್ಲಾ ತರವಾದ ರೋಗವನ್ನು ಮತ್ತು ಎಲ್ಲಾ ತರವಾದ ಅಸ್ವಸ್ಥತೆಯನ್ನು ಸ್ವಸ್ಥ ಮಾಡು ವಂತೆಯೂ ಅವರಿಗೆ ಅಧಿಕಾರ ಕೊಟ್ಟನು. (ಮಾರ್ಕನು 3:14,15) 8 ರೋಗಿಗಳನ್ನು ಸ್ವಸ್ಥಮಾಡಿರಿ, ಕುಷ್ಠರೋಗಿಗಳನ್ನು ಶುದ್ಧಮಾಡಿರಿ, ಸತ್ತವರನ್ನು ಎಬ್ಬಿಸಿರಿ, ದೆವ್ವಗಳನ್ನು ಬಿಡಿಸಿರಿ; ನೀವು ಉಚಿತವಾಗಿ ಹೊಂದಿದ್ದೀರಿ, ಉಚಿತ ವಾಗಿ ಕೊಡಿರಿ.

ಮತ್ತಾಯನು 11:5 ಕುರುಡರು ದೃಷ್ಟಿ ಹೊಂದುತ್ತಾರೆ, ಕುಂಟರು ನಡೆಯುತ್ತಾರೆ,ಕುಷ್ಟರೋಗಿಗಳು ಶುದ್ಧರಾಗುತ್ತಾರೆ, ಕಿವುಡರು ಕೇಳುತ್ತಾರೆ, ಸತ್ತವರು ಎಬ್ಬಿಸಲ್ಪಡುತ್ತಾರೆ ಮತ್ತು ಬಡವರಿಗೆ ಸುವಾರ್ತೆ ಸಾರಲ್ಪಡುತ್ತದೆ.

ಮತ್ತಾಯನು 12:15 ಆದರೆ ಯೇಸು ಅದನ್ನು ತಿಳಿದು ಅಲ್ಲಿಂದ ಹೊರಟು ಹೋದನು; ಮತ್ತು ದೊಡ್ಡ ಸಮೂಹಗಳು ಆತನನ್ನು ಹಿಂಬಾಲಿಸಿದರು. ಆಗ ಆತನು ಅವರೆಲ್ಲರನ್ನು ವಾಸಿ ಮಾಡಿದನು.

ಮತ್ತಾಯನು 15:30 ಆಗ ಜನರ ದೊಡ್ಡ ಸಮೂಹಗಳು ಕುಂಟರನ್ನು ಕುರುಡರನ್ನು ಮೂಕರನ್ನು ಊನವಾದವರನ್ನು ಮತ್ತು ಬೇರೆ ಅನೇಕರನ್ನು ತಮ್ಮೊಂದಿಗೆ ಕರಕೊಂಡು ಯೇಸು ವಿನ ಪಾದಗಳ ಬಳಿಗೆ ತಂದರು. ಮತ್ತು ಆತನು ಅವರನ್ನು ಸ್ವಸ್ಥಪಡಿಸಿದನು.

ಮತ್ತಾಯನು 17:20 ಯೇಸು ಅವರಿಗೆ--ನಿಮ್ಮ ಅಪನಂಬಿಕೆಯ

ದೆಸೆಯಿಂದಲೇ; ನಾನು ನಿಮಗೆ ನಿಜವಾಗಿ ಹೇಳುವದೇನಂದರೆ--
ಸಾಸಿವೆ ಕಾಳಷ್ಟು ನಂಬಿಕೆ ನಿಮಗಿರುವದಾದರೆ ನೀವು ಈ ಬೆಟ್ಟಕ್ಕೆ--
ಇಲ್ಲಿಂದ ಆ ಸ್ಥಳಕ್ಕೆ ಹೋಗು ಎಂದು ಹೇಳಿದರೆ ಅದು ಹೋಗುವದು;
ಮತ್ತು ಯಾವದೂ ನಿಮಗೆ ಅಸಾಧ್ಯವಾಗಿರುವದಿಲ್ಲ.

ಮಾರ್ಕನು 1:34 ಇದಲ್ಲದೆ ವಿಧವಿಧವಾದ ರೋಗ ಗಳಿಂದ ಅಸ್ವಸ್ಥರಾಗಿದ್ದ ಅನೇಕರನ್ನು ಆತನು ಸ್ವಸ್ಥಮಾಡಿ ಬಹಳ ದೆವ್ವಗಳನ್ನು ಬಿಡಿಸಿದನು; ಮತ್ತು ದೆವ್ವಗಳು ಆತನನ್ನು ಅರಿತಿದ್ದದರಿಂದ ಆತನು ಅವುಗಳಿಗೆ ಮಾತನಾಡಗೊಡಿಸಲಿಲ್ಲ.

ಮಾರ್ಕನು 3:10 ಯಾಕಂದರೆ ಆತನು ಅನೇಕರನ್ನು ಸ್ವಸ್ಥಮಾಡಿದ್ದರಿಂದ ರೋಗಪೀಡಿತರಾಗಿದ್ದವರೆಲ್ಲರು ಆತನನ್ನು ಮುಟ್ಟಬೇ ಕೆಂದು ಆತನ ಮೇಲೆ ಬೀಳುತ್ತಿದ್ದರು.

ಮಾರ್ಕನು 6:5,6 ಆತನು ಅಲ್ಲಿ ಕೆಲವು ರೋಗಿಗಳ ಮೇಲೆ ತನ್ನ ಕೈಗಳನ್ನಿಟ್ಟು ಸ್ವಸ್ಥಪಡಿಸಿದನೇ ಹೊರತು ಬೇರೆ ಯಾವ ಮಹತ್ಕಾರ್ಯವನ್ನೂ ಮಾಡುವದಕ್ಕಾಗಲಿಲ್ಲ. 6 ಆತನು ಅವರ ಅಪನಂಬಿಕೆ ಯ ದೆಸೆಯಿಂದ ಆಶ್ಚರ್ಯಪಟ್ಟನು; ಮತ್ತು ಸುತ್ತಲಿನ ಹಳ್ಳಿಗಳಿಗೆ ಹೋಗಿ ಬೋಧಿಸುತ್ತಾ ಇದ್ದನು.

ಮಾರ್ಕನು 6:13 ಅವರು ಅನೇಕ ದೆವ್ವಗಳನ್ನು ಬಿಡಿಸಿ ಬಹಳ ರೋಗಿಗಳಿಗೆ ಎಣ್ಣೆ ಹಚ್ಚಿ ಅವರನ್ನು ಸ್ವಸ್ಥಪಡಿಸಿದರು.

ಮಾರ್ಕನು 6:55,56 ಸುತ್ತಲಿನ ಸೀಮೆಯಲ್ಲೆಲ್ಲಾ ಓಡಾಡಿ ಆತನು ಎಲ್ಲಿದ್ದಾನೆಂದು ಕೇಳಿ ಇದ್ದಲ್ಲಿಗೆ ಅಸ್ವಸ್ಥತೆಯುಳ್ಳವರನ್ನು

ಹಾಸಿಗೆಗಳೊಂದಿಗೆ ಎತ್ತಿಕೊಂಡು ಹೋಗಲಾರಂಭಿಸಿದರು. 56 ತರುವಾಯ ಆತನು ಯಾವ ಯಾವ ಹಳ್ಳಿಗಳಲ್ಲಿ, ಪಟ್ಟಣಗಳಲ್ಲಿ, ಸೀಮೆಯಲ್ಲಿ ಪ್ರವೇಶಿಸಿದನೋ ಅಲ್ಲೆಲ್ಲಾ ಅವರು ಅಸ್ವಸ್ಥ ವಾದವರನ್ನು ಬೀದಿಗಳಲ್ಲಿ ಮಲಗಿಸಿ ಆತನ ಉಡುಪಿನ ಅಂಚನ್ನಾದರೂ ಅವರು ಮುಟ್ಟಗೊಡಿಸಬೇಕೆಂದು ಆತನನ್ನು ಬೇಡಿಕೊಂಡರು; ಯಾರಾರು ಆತನನ್ನು ಮುಟ್ಟಿದರೋ ಅವರು ಸ್ವಸ

ಮಾರ್ಕನು 8:23-25 ಆತನು ಆ ಕುರುಡನ ಕೈಹಿಡಿದು ಊರಿನ ಹೊರಗೆ ಕರಕೊಂಡು ಹೋಗಿ ಅವನ ಕಣ್ಣುಗಳ ಮೇಲೆ ಉಗುಳಿ ತನ್ನ ಕೈಗಳನ್ನು ಅವನ ಮೇಲೆ ಇಟ್ಟು ಏನಾದರೂ ಕಾಣುತ್ತದೋ ಎಂದು ಅವನನ್ನು ಕೇಳಿದನು. 24 ಅವನು ಮೇಲಕ್ಕೆ ನೋಡಿ--ಮನುಷ್ಯರು ಮರಗಳ ಹಾಗೆ ನಡೆದಾಡುವದನ್ನು ನೋಡುತ್ತೇನೆ ಅಂದನು. 25 ತರುವಾಯ ಆತನು ತಿರಿಗಿ ಅವನ ಕಣ್ಣುಗಳ ಮೇಲೆ ತನ್ನ ಕೈಗಳನ್ನಿಟ್ಟು ಅವನು ಮೇಲಕ್ಕೆ ನೋಡುವಂತೆ ಮಾಡಿದನು; ಆಗ ಅವನು ಗುಣಹೊಂದಿದವನಾಗಿ ಪ್ರತಿ ಮನುಷ್ಯನನ್ನು ಸ್ಪಷ್ಟವಾಗಿ ನೋಡಿದನು.

ಮಾರ್ಕನು 9:29 ಆತನು ಅವರಿಗೆ--ಈ ತರವಾ ದದ್ದು ಪ್ರಾರ್ಥನೆ ಉಪವಾಸಗಳಿಂದ ಹೊರತು ಬೇರೆ ಯಾವದರಿಂದಲೂ ಹೊರಗೆ ಬರಲಾರದು ಅಂದನು.

ಮಾರ್ಕನು 16:17,18 ಇದಲ್ಲದೆ ನಂಬುವವರಿಂದ ಈ ಸೂಚಕಕಾರ್ಯಗಳು ಉಂಟಾಗುವವು; ಅವರು ನನ್ನ ಹೆಸರಿನಲ್ಲಿ

ದೆವ್ವಗಳನ್ನು ಬಿಡಿಸುವರು; ಅವರು ಹೊಸ ಭಾಷೆಗಳಲ್ಲಿ ಮಾತನಾಡುವರು; 18 ಅವರು ಸರ್ಪಗಳನ್ನು ಎತ್ತುವರು; ಮರಣಕರವಾದದ್ದೇ ನಾದರೂ ಕುಡಿದರೆ ಅದು ಅವರಿಗೆ ಯಾವ ಕೇಡನ್ನೂ ಮಾಡುವದಿಲ್ಲ; ಅವರು ರೋಗಿಗಳ ಮೇಲೆ ಕೈಗಳನ್ನಿಡು ವಾಗ ಅವರು ಸ್ವಸ್ಥರಾಗುವರು ಎಂದು ಹೇಳಿದನು.

ಲೂಕನು 4:18 ಕರ್ತನ ಆತ್ಮವು ನನ್ನ ಮೇಲೆ ಇದೆ; ಯಾಕಂದರೆ ಬಡವರಿಗೆ ಸುವಾರ್ತೆ ಸಾರುವದಕ್ಕೆ ಆತನು ನನ್ನನ್ನು ಅಭಿಷೇಕಿಸಿದ್ದಾನೆ; ಮುರಿದ ಹೃದಯ ವುಳ್ಳವರನ್ನು ಸ್ವಸ್ಥಮಾಡುವದಕ್ಕೂ ಸೆರೆಯಲ್ಲಿದ್ದವರಿಗೆ ಬಿಡುಗಡೆಯನ್ನು ಸಾರುವದಕ್ಕೂ ಕುರುಡರಿಗೆ ದೃಷ್ಟಿ ಕೊಡುವದಕ್ಕೂ ಜಜ್ಜಲ್ಪಟ್ಟವರನ್ನು ಬಿ

ಲೂಕನು 4:40 ಸೂರ್ಯಾಸ್ತಮಾನವಾಗುತ್ತಿದ್ದಾಗ ನಾನಾ ವಿಧ ವಾದ ರೋಗಗಳಿಂದ ಅಸ್ವಸ್ಥವಾದವರೆಲ್ಲರನ್ನು ಅವರು ಆತನ ಬಳಿಗೆ ತಂದರು; ಆತನು ಅವರಲ್ಲಿ ಪ್ರತಿಯೊಬ್ಬನ ಮೇಲೆ ತನ್ನ ಕೈಗಳನ್ನಿಟ್ಟು ಅವರನ್ನು ಸ್ವಸ್ಥಪಡಿಸಿದನು.

ಲೂಕನು 5:15 ಆದರೂ ಆತನ ಕೀರ್ತಿಯು ಇನ್ನೂ ಹೆಚ್ಚಾಗಿ ದೂರದವರೆಗೂ ಹರಡಿತು; ದೊಡ್ಡ ಸಮೂಹಗಳು ಆತನ ಉಪದೇಶವನ್ನು ಕೇಳುವದಕ್ಕೂ ತಮ್ಮ ರೋಗಗಳನ್ನು ಆತನಿಂದ ವಾಸಿಮಾಡಿಸಿಕೊಳ್ಳು ವದಕ್ಕೂ ಕೂಡಿ ಬಂದರು.

ಲೂಕನು 5:17-25 ಇದಾದ ಮೇಲೆ ಒಂದಾನೊಂದು ದಿನ ಆತನು

ಬೋಧಿಸುತ್ತಿದ್ದಾಗ ಗಲಿಲಾಯ ಯೂದಾಯ ಮತ್ತು ಯೆರೂಸಲೇಮಿನ ಪ್ರತಿಯೊಂದು ಊರಿನಿಂದ ಬಂದಿದ್ದ ಫರಿಸಾಯರೂ ನ್ಯಾಯಪ್ರಮಾಣದ ಪಂಡಿತರೂ ಅಲ್ಲಿ ಕೂತುಕೊಂಡಿದ್ದರು. ಕರ್ತನ ಶಕ್ತಿಯು ಅವರನ್ನು ಸ್ವಸ್ಥ ಮಾಡುವದಕ್ಕೆ ಸಿದ್ಧವಿತ್ತು. 18 ಆಗ ಇಗೋ, ಪಾರ್ಶ್ವವಾಯು ರೋಗವಿದ್ದ ಒಬ್ಬ ಮನುಷ್ಯನನ್ನು ಕೆಲವರು ಹಾಸಿಗೆಯಲ್ಲಿ ಹೊತ್ತು ಕೊಂಡು ಬಂದು ಅವನನ್ನು ಒಳಗೆ ಆತನ ಎದುರಿಗೆ ತರುವ ವಿಧಾನವನ್ನು ಹುಡುಕಿದರು. 19 ಆದರೆ ಅಲ್ಲಿದ್ದ ಜನಸಮೂಹದವರ ನಿಮಿತ್ತ ಅವರು ಅವನನ್ನು ಒಳಗೆ ತರುವ ಯಾವ ವಿಧಾನವನ್ನೂ ಕಾಣದೆ ಮನೆಯಮೇಲೆ ಹೋಗಿ ಹಂಚುಗಳನ್ನು ತೆಗೆದು ಅವನನ್ನು ಹಾಸಿಗೆಯೊಂದಿಗೆ ನಡುವೆ ಯೇಸುವಿನ ಮುಂದೆ ಇಳಿಸಿದರು. 20 ಆಗ ಆತನು ಅವರ ನಂಬಿಕೆಯನ್ನು ನೋಡಿ ಅವನಿಗೆ-- ಮನುಷ್ಯನೇ, ನಿನ್ನ ಪಾಪಗಳು ನಿನಗೆ ಕ್ಷಮಿಸಲ್ಪಟ್ಟಿವೆ ಎಂದು ಹೇಳಿದನು. 21 ಆಗ ಶಾಸ್ತ್ರಿಗಳೂ ಫರಿ ಸಾಯರೂ-- ದೇವದೂಷಣೆಗಳನ್ನು ಮಾಡುವದಕ್ಕೆ ಇವನು ಯಾರು? ದೇವರೊಬ್ಬನೇ ಹೊರತು ಪಾಪಗಳನ್ನು ಕ್ಷಮಿಸುವವರು ಯಾರು ಎಂದು ತಮ್ಮಲ್ಲಿ ಮಾತನಾಡಿಕೊಂಡರು. 22 ಆದರೆ ಯೇಸು ಅವರ ಆಲೋಚನೆಗಳನ್ನು ತಿಳಿದು ಪ್ರತ್ಯುತ್ತರವಾಗಿ ಅವರಿಗೆ--ನೀವು ನಿಮ್ಮ ಹೃದಯಗಳಲ್ಲಿ ಅಂದು ಕೊಳ್ಳುತ್ತಿರುವದೇನು? 23 ಯಾವದು ಸುಲಭ-- ನಿನ್ನ ಪಾಪಗಳು ನಿನಗೆ ಕ್ಷಮಿಸಲ್ಪಟ್ಟಿವೆ ಅನ್ನುವದೋ? ಇಲ್ಲವೆ--ಎದ್ದು ನಡೆ ಅನ್ನುವದೋ? 24 ಆದರೆ ಮನುಷ್ಯಕುಮಾರನಿಗೆ

ಪಾಪಗಳನ್ನು ಕ್ಷಮಿಸುವದಕ್ಕೆ ಭೂಮಿಯ ಮೇಲೆ ಅಧಿಕಾರವುಂಟೆಂದು ನೀವು ತಿಳಿಯಬೇಕು (ಎಂದು ಹೇಳಿ ಆ ಪಾರ್ಶ್ವವಾಯು ರೋಗಿಗೆ)--ಎದ್ದು ನಿನ್ನ ಹಾಸಿಗೆಯನ್ನು ತಕ್ಕೊಂಡು ನಿನ್ನ ಮನೆಗೆ ಹೋಗು ಎಂದು ನಾನು ನಿನಗೆ ಹೇಳುತ್ತೇನೆ ಅಂದನು. 25 ಕೂಡಲೆ ಅವನು ಅವರ ಮುಂದೆ ಎದ್ದು ತಾನು ಮಲಗಿದ್ದ ಹಾಸಿಗೆಯನ್ನು ಎತ್ತಿಕೊಂಡು ದೇವರನ್ನು ಕೊಂಡಾಡುತ್ತಾ ತನ್ನ ಸ್ವಂತ ಮನೆಗೆ ಹೊರಟುಹೋದನು.

ಲೂಕನು 6:17-19 ಆತನು ಅವರೊಂದಿಗೆ ಕೆಳಗಿಳಿದು ಸಮ ಭೂಮಿಯ ಮೇಲೆ ನಿಂತಿದ್ದಾಗ ಆತನ ಶಿಷ್ಯರ ಗುಂಪು ಅಲ್ಲದೆ ಯೂದಾಯ ಯೆರೂಸಲೇಮಿನಿಂದಲೂ ತೂರ್ ಸೀದೋನಿನ ಸಮುದ್ರತೀರದಿಂದಲೂ ಆತನ ಉಪದೇಶವನ್ನು ಕೇಳುವದಕ್ಕೂ ತಮ್ಮ ರೋಗಗಳಿಂದ ಸ್ವಸ್ಥರಾಗುವದಕ್ಕೂ ಜನರು ದೊಡ್ಡ ಸಮೂಹವಾಗಿ ಬಂ 18 ಅಶುದ್ಧಾತ್ಮಗಳಿಂದ ಪೀಡಿತರಾದವರೂ ಬಂದು ಸ್ವಸ್ಥರಾದರು. 19 ಆಗ ಸಮೂಹವೆಲ್ಲಾ ಆತ ನನ್ನು ಮುಟ್ಟಬೇಕೆಂದು ಪ್ರಯತ್ನಿಸಿದರು; ಯಾಕಂದರೆ ಆತನಿಂದ ಶಕ್ತಿಯು ಹೊರಟು ಅವರೆಲ್ಲರನ್ನು ಸ್ವಸ್ಥ ಮಾಡಿತು.

ಲೂಕನು 7:21,22 ಅದೇಗಳಿಗೆಯಲ್ಲಿ ರೋಗ ಗಳಿಂದಲೂ ವ್ಯಾಧಿಗಳಿಂದಲೂ ದುರಾತ್ಮಗಳಿಂದಲೂ ಪೀಡಿತರಾದ ಅನೇಕರನ್ನು ಆತನು ಗುಣಪಡಿಸಿದನು; ಕುರುಡರಾದ ಅನೇಕರಿಗೆ ದೃಷ್ಟಿಕೊಟ್ಟನು. 22 ತರು ವಾಯ ಯೇಸು ಪ್ರತ್ಯುತ್ತರವಾಗಿ ಅವರಿಗೆ--ಕುರು ಡರು ನೋಡುತ್ತಾರೆ, ಕುಂಟರು ನಡೆಯುತ್ತಾರೆ, ಕುಷ್ಠ ರೋಗಿಗಳು

ಶುದ್ಧರಾಗುತ್ತಾರೆ, ಕಿವುಡರು ಕೇಳುತ್ತಾರೆ, ಸತ್ತವರು ಎಬ್ಬಿಸಲ್ಪಡುತ್ತಾರೆ, ಬಡವರಿಗೆ ಸುವಾರ್ತೆಯು ಸಾರಲ್ಪಡುತ್ತದೆ ಎಂದು ನೀವು ಕಂಡು ಕೇಳಿದ ಇವು ಗಳನ್ನು

ಲೂಕನು 8:2 ಇದಲ್ಲದೆ ದುರಾತ್ಮಗಳಿಂ ದಲೂ ರೋಗಗಳಿಂದಲೂ ಸ್ವಸ್ಥಮಾಡಲ್ಪಟ್ಟ ಕೆಲವು ಸ್ತ್ರೀಯರು ಮತ್ತು ಏಳು ದೆವ್ವಗಳು ಬಿಟ್ಟು ಹೋಗಿದ್ದ ಮಗ್ದಲಿನ ಎಂದು ಕರೆಯಲ್ಪಟ್ಟ ಮರಿಯಳೂ

ಲೂಕನು 9:2 ದೇವರ ರಾಜ್ಯವನ್ನು ಸಾರುವದಕ್ಕೂ ರೋಗಿಗಳನ್ನು ಸ್ವಸ್ಥಮಾಡುವದಕ್ಕೂ ಆತನು ಅವರನ್ನು ಕಳುಹಿಸಿಕೊಟ್ಟನು.

ಲೂಕನು 9:11 ಆಗ ಜನರು ಅದನ್ನು ತಿಳಿದು ಆತನನ್ನು ಹಿಂಬಾಲಿಸಲು ಆತನು ಅವರನ್ನು ಅಂಗೀಕರಿಸಿ ದೇವರ ರಾಜ್ಯದ ವಿಷಯವಾಗಿ ಅವರ ಸಂಗಡ ಮಾತನಾಡಿ ಸ್ವಸ್ಥತೆ ಬೇಕಾಗಿದ್ದವರನ್ನು ಸ್ವಸ್ಥ ಮಾಡಿದನು.

ಲೂಕನು 13:12 ಯೇಸು ಆಕೆಯನ್ನು ನೋಡಿ ಹತ್ತಿರಕ್ಕೆ ಕರೆದು ಆಕೆಗೆ--ಸ್ತ್ರೀಯೇ, ನೀನು ಈ ನಿನ್ನ ರೋಗದಿಂದ ಬಿಡುಗಡೆಯಾಗಿದ್ದೀ ಎಂದು ಹೇಳಿ

ಲೂಕನು 13:32 ಆತನು ಅವರಿಗೆ--ಇಗೋ, ನಾನು ಈ ದಿವಸ ಮತ್ತು ನಾಳೆ ದೆವ್ವಗಳನ್ನು ಬಿಡಿಸಿ ಸ್ವಸ್ಥಮಾಡುತ್ತೇನೆ; ಮೂರನೆಯ ದಿನದಲ್ಲಿ ನಾನು ಸಿದ್ಧಿಗೆ ಬರುತ್ತೇನೆ ಎಂದು ನೀವು ಹೋಗಿ ಆ ನರಿಗೆ ಹೇಳಿರಿ.

ಯೋಹಾನನು 5:8,14 ಯೇಸು ಅವನಿಗೆ-- ಎದ್ದು ನಿನ್ನ ಹಾಸಿಗೆಯನ್ನು ತೆಗೆದುಕೊಂಡು ನಡೆ ಅಂದನು. 14 ತರುವಾಯ ಯೇಸು ಅವನನ್ನು ದೇವಾಲಯದಲ್ಲಿ ಕಂಡುಕೊಂಡು ಅವ ನಿಗೆ--ಇಗೋ, ನಿನಗೆ

ಸ್ವಸ್ಥವಾಯಿತಲ್ಲಾ; ನಿನ್ನ ಮೇಲೆ ಹೆಚ್ಚಿನ ಕೇಡು ಬಾರದಂತೆ ಇನ್ನು ಪಾಪಮಾಡಬೇಡ ಅಂದನು.

ಯೋಹಾನನು 14:12 ನಾನು ನಿಮಗೆ ನಿಜನಿಜವಾಗಿ ಹೇಳುತ್ತೇನೆ--ನನ್ನನ್ನು ನಂಬುವವನು ನಾನು ಮಾಡುವ ಕ್ರಿಯೆ ಗಳನ್ನು ಸಹ ಮಾಡುವನು; ಇವುಗಳಿಗಿಂತ ಮಹತ್ತಾದ ಕ್ರಿಯೆಗಳನ್ನು ಅವನು ಮಾಡುವನು; ಯಾಕಂದರೆ ನಾನು ನನ್ನ ತಂದೆಯ ಬಳಿಗೆ ಹೋಗುತ್ತೇನೆ.

ಅಪೊಸ್ತಲರ ಕೃತ್ಯಗ 3:6 ಆಗ ಪೇತ್ರನು--ಬೆಳ್ಳಿಬಂಗಾರವಂತೂ ನನ್ನಲ್ಲಿಲ್ಲ. ಆದರೆ ನನಗಿರುವದನ್ನು ನಿನಗೆ ಕೊಡುತ್ತೇನೆ; ನಜರೇತಿನ ಯೇಸು ಕ್ರಿಸ್ತನ ಹೆಸರಿನಲ್ಲಿ ಎದ್ದು ನಡೆದಾಡು ಎಂದು ಹೇಳಿ

ಅಪೊಸ್ತಲರ ಕೃತ್ಯಗ 5:15,16 ಹೀಗಿರುವದರಿಂದ ಪೇತ್ರನು ಹಾದು ಹೋಗುವಾಗ ಅವನ ನೆರಳಾದರೂ ಅವರಲ್ಲಿ ಕೆಲವರ ಮೇಲೆ ಬೀಳುವಂತೆ ಜನರು ರೋಗಿಗಳನ್ನು ಹಾಸಿಗೆಗಳ ಮೇಲೆಯೂ ದೋಲಿಗಳ ಮೇಲೆಯೂ ಇಟ್ಟು ಬೀದಿಗಳಿಗೆ ತೆಗೆದುಕೊಂಡು ಬಂದರು. 16 ಜನಸಮೂಹವು ಸುತ್ತಮುತ್ತಲಿನ ಪಟ್ಟಣ ಗಳಿಂದ ರೋಗಿಗಳನ್ನೂ ಅಶುದ್ಧಾತ್ಮಗಳಿಂದ ಪೀಡಿಸಲ್ಪಟ್ಟ ವರನ್ನೂ ತೆಗೆದುಕೊಂಡು ಯೆರೂಸಲೇಮಿಗೆ ಬಂದರು ಮತ್ತು ಅವರಲ್ಲಿ ಪ್ರತಿಯೊಬ್ಬನೂ ಗುಣಹೊಂದಿದನು.

ಅಪೊಸ್ತಲರ ಕೃತ್ಯಗ 10:38 ದೇವರು ನಜರೇತಿನ ಯೇಸುವನ್ನು ಪವಿತ್ರಾತ್ಮನಿಂದಲೂ ಬಲದಿಂದಲೂ ಅಭಿಷೇಕಿಸಿದ ನೆಂಬದನ್ನೂ

ಹೇಗೆ ಆತನು ಒಳ್ಳೇದನ್ನು ಮಾಡುತ್ತಾ ಸೈತಾನನಿಂದ ಬಾಧಿಸಲ್ಪಡುತ್ತಿರುವವರೆಲ್ಲರನ್ನು ಗುಣ ಮಾಡುತ್ತಾ ಸಂಚರಿಸಿದನೆಂಬದನ್ನು ನೀವು ತಿಳಿದಿದ್ದೀರಿ; ಯಾಕಂದರೆ ದೇವರು ಆತನ ಸಂಗಡ ಇದ್ದನು.

ಅಪೊಸ್ತಲರ ಕೃತ್ಯಗ 19:11,12 ದೇವರು ಪೌಲನ ಕೈಯಿಂದ ವಿಶೇಷವಾದ ಮಹತ್ಕಾರ್ಯಗಳನ್ನು ನಡಿಸುತ್ತಾ ಇದ್ದದರಿಂದ 12 ಜನರು ಅವನ ಮೈಮೇಲಿನಿಂದ ಕೈವಸ್ತ್ರಗಳನ್ನೂ ಉಡಿವಸ್ತ್ರಗಳನ್ನೂ ತಂದು ರೋಗಿಗಳ ಮೇಲೆ ಹಾಕಲು ಅವರವರ ರೋಗಗಳು ವಾಸಿಯಾದವು, ದೆವ್ವಗಳೂ ಬಿಟ್ಟುಹೋದವು.

ರೋಮಾಪುರದವರಿಗೆ 8:26 ಹಾಗೆಯೇ ಆತ್ಮನು ಸಹ ನಮ್ಮ ಬಲಹೀನತೆ ಗಳಿಗೆ ಸಹಾಯಮಾಡುತ್ತಾನೆ; ಹೇಗಂದರೆ ನಾವು ತಕ್ಕ ಪ್ರಕಾರ ಏನು ಬೇಡಿಕೊಳ್ಳಬೇಕೋ ನಮಗೆ ಗೊತ್ತಿಲ್ಲವಾದ್ದರಿಂದ ಆತ್ಮನು ತಾನೇ ಉಚ್ಚರಿಸಲಾಗ ದಂಥ ನರಳಾಟದಿಂದ ನಮಗೋಸ್ಕರ ವಿಜ್ಞಾಪನೆ ಮಾಡುತ್ತಾನೆ.

1 ಕೊರಿಂಥದವರಿಗೆ 12:9 ಬೇರೊಬ್ಬನಿಗೆ ಆ ಆತ್ಮನಿಂದಲೇ ನಂಬಿಕೆಯು, ಮತ್ತೊಬ್ಬನಿಗೆ ಆ ಆತ್ಮನಿಂದಲೇ ರೋಗ ಗಳನ್ನು ವಾಸಿಮಾಡುವ ವರಗಳು,

1 ಕೊರಿಂಥದವರಿಗೆ 12:28 ದೇವರು ಕೆಲವರನ್ನು ಸಭೆಯಲ್ಲಿ ಮೊದಲನೆಯದಾಗಿ ಅಪೊಸ್ತಲರನ್ನು, ಎರಡನೆಯದಾಗಿ ಪ್ರವಾದಿಗಳನ್ನು, ಮೂರನೆಯದಾಗಿ ಉಪದೇಶಕರನ್ನು ಇಟ್ಟಿದ್ದಾನೆ;

ಆಮೇಲೆ ಮಹತ್ಕಾರ್ಯ ಗಳನ್ನೂ ವಾಸಿಮಾಡುವ ವರಗಳನ್ನೂ ಸಹಾಯ ಮಾಡುವವದನ್ನೂ ಕಾರ್ಯಗಳನ್ನು ನಿರ್ವಹಿಸುವವದನ್ನೂ ವಿವಿಧ ಭಾಷೆಗಳನಾ

ಫಿಲಿಪ್ಪಿಯವರಿಗೆ 2:27 ಅವನು ರೋಗದಲ್ಲಿ ಬಿದ್ದು ಸಾಯುವಹಾಗಿದ್ದನೆಂಬದು ನಿಜವೇ. ಆದರೆ ದೇವರು ಅವನನ್ನು ಕರುಣಿಸಿದನು; ಅವನನ್ನು ಮಾತ್ರವಲ್ಲದೆ ನನಗೆ ದುಃಖದ ಮೇಲೆ ದುಃಖ ಬಾರದಂತೆ ನನ್ನನ್ನೂ ಕರುಣಿಸಿದನು.

ಯಾಕೋಬನು 5:14 ನಿಮ್ಮಲ್ಲಿ ಯಾವ ನಾದರೂ ಅಸ್ವಸ್ಥನಾಗಿರುವವನು ಇದ್ದಾನೋ? ಅವನು ಸಭೆಯ ಹಿರಿಯರನ್ನು ಕರೇಕಳುಹಿಸಲಿ; ಅವರು ಕರ್ತನ ಹೆಸರಿನಿಂದ ಎಣ್ಣೆಹಚ್ಚಿ ಅವನಿಗೋಸ್ಕರ ಪ್ರಾರ್ಥಿಸಲಿ.

1 ಪೇತ್ರನು 2:24 ನಾವು ಪಾಪಗಳ ಪಾಲಿಗೆ ಸತ್ತು ನೀತಿವಂತರಾಗಿ ಜೀವಿಸುವಂತೆ ಆತನು ಮರದ ಮೇಲೆ ನಮ್ಮ ಪಾಪ ಗಳನ್ನು ತಾನೇ ತನ್ನ ದೇಹದಲ್ಲಿ ಹೊತ್ತನು; ಆತನ ಬಾಸುಂಡೆಗಳಿಂದ ನಿಮಗೆ ಗುಣವಾಯಿತು.

3 ಯೋಹಾನನು 1:2 ಪ್ರಿಯನೇ, ನಿನ್ನ ಆತ್ಮವು ಅಭಿವೃದಿ ಹೊಂದಿರುವ ಪ್ರಕಾರವೇ ಎಲ್ಲಾ ವಿಷಯಗಳಿಗಿಂತ ನೀನು ಸ್ವಸ್ಥನಾಗಿದ್ದು ಕ್ಷೇಮಹೊಂದಿ ಅಭಿವೃದ್ಧಿಯಾಗ ಬೇಕೆಂದು ನಾನು ಅಪೇಕ್ಷಿಸುತ್ತೇನೆ.

Pastor T. John Franklin
Church of Salvation, Healing, and Deliverance
COS-HAD.org